# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1180 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್. ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 15-12-2023 |
| ಉತ್ತರಿಸುವ ಸಚಿವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಅಪೌಷ್ಟಿಕತೆ ಹೋಗಲಾಡಿಸಲು "ಮಾತೃಪೂರ್ಣ" ಹಾಗೂ "ಸೃಷ್ಟಿ" ಯೋಜನೆಯಡಿ 3-6 ವರ್ಷದೊಳಗಿನ ಮಕ್ಕಳು, ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ಅಂಗನವಾಡಿ ಮೂಲಕ ಮೊಟ್ಟೆ ವಿತರಿಸುವ ಯೋಜನೆ ಸ್ಥಗಿತಗೊಂಡಿದ್ದರಿಂದ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಕೇಂದ್ರಗಳಲ್ಲಿ ದಾಖಲಾಗುವ 3 ರಿಂದ 6 ವರ್ಷದ ಮಕ್ಕಳಿಗೆ ಮತ್ತು 6 ತಿಂಗಳಿಂದ 6 ವರ್ಷದ ತೀವ್ರ ಮತ್ತು ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ಸೃಷ್ಟಿ ಯೋಜನೆಯಡಿ ಹಾಗೂ ಗರ್ಭಿಣಿ ಮತ್ತು ಬಾಣಂತಿಯರಿಗೆ ಮಾತೃಪೂರ್ಣ ಯೋಜನೆಯಡಿ ಕೋಳಿಮೊಟ್ಟೆಗಳನ್ನು ವಿತರಿಸಲಾಗುತ್ತಿದ್ದು, ಮೊಟ್ಟೆ ಸರಬರಾಜು ಸ್ಥಗಿತಗೊಂಡಿರುವುದಿಲ್ಲ. |
| ಆ. | ಬಂದಿದ್ದಲ್ಲಿ, ಮೊಟ್ಟೆ ವಿತರಿಸುವ ಸದರಿ ಯೋಜನೆ ಸ್ಥಗಿತಗೊಳ್ಳಲು ಕಾರಣಗಳೇನು; | ಉದ್ಭವಿಸುವುದಿಲ್ಲ. |
| ಇ. | ಅಪೌಷ್ಟಿಕತೆ ಹೋಗಲಾಡಿಸಲು ಕೈಗೊಂಡಿದ್ದ ಈ ಮಹತ್ವಪೂರ್ಣ ಹಾಗೂ ಅತ್ಯಂತ ಬೇಡಿಕೆಯ ಯೋಜನೆ ಸ್ಥಗಿತಗೊಂಡಿದ್ದರಿಂದ 3-6 ವರ್ಷದೊಳಗಿನ ಮಕ್ಕಳು, ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ತೊಂದರೆಯಾಗುವುದನ್ನು ತಪ್ಪಿಸಲು ಸರ್ಕಾರ ಸಕಾಲದಲ್ಲಿ ಕ್ರಮವಹಿಸದಿರುವುದಕ್ಕೆ ಕಾರಣಗಳೇನು; | |
| ಈ. | ಅಪೌಷ್ಟಿಕತೆ ಹೋಗಲಾಡಿಸಲು ಕೈಗೊಂಡಿದ್ದ ಈ ಮಹತ್ವಪೂರ್ಣ ಹಾಗೂ ಅತ್ಯಂತ ಬೇಡಿಕೆಯ ಯೋಜನೆಯಲ್ಲಿ ಇನ್ನು ಮುಂದೆ ಯಾವುದೇ ಸ್ಥಗಿತ ಅಥವಾ ವ್ಯತ್ಯಯವಾಗದಂತೆ ನೋಡಿಕೊಳ್ಳಲು ಸರ್ಕಾರ ಈ ಕೂಡಲೇ ಸೂಕ್ತ ಕ್ರಮ ವಹಿಸುವುದೇ? | ಅಂಗನವಾಡಿ ಫಲಾನುಭವಿಗಳಿಗೆ ಈ ಹಿಂದೆ ತಾಲ್ಲೂಕು ಮಟ್ಟದಲ್ಲಿ ಟೆಂಡರ್ ಕರೆದು ಕೋಳಿಮೊಟ್ಟೆಗಳನ್ನು ಖರೀದಿಸಿ ವಿತರಿಸಲು ಕ್ರಮ ವಹಿಸಲಾಗುತ್ತಿತ್ತು. ಪ್ರಸ್ತುತ 2023-24ನೇ ಸಾಲಿನಿಂದ ವಿಭಾಗೀಯ ಮಟ್ಟದಲ್ಲಿ ಟೆಂಡರ್ ಕರೆದು ಕೋಳಿಮೊಟ್ಟೆಗಳನ್ನು ಖರೀದಿಸಲು ದಿನಾಂಕ: 10/08/2023 ರ ಸರ್ಕಾರದ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.<br><br>ಅದರಂತೆ ಈಗಾಗಲೇ ರಾಜ್ಯದ 4 ವಿಭಾಗಗಳ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಮೈಸೂರು ವಿಭಾಗದ ಕೋಳಿಮೊಟ್ಟೆ ಟೆಂಡರ್ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ.<br>ಮುಂದುವರೆದು, ವಿಭಾಗೀಯ ಮಟ್ಟದ ಕೋಳಿಮೊಟ್ಟೆ ಟೆಂಡರ್ ಕರೆದು ಫಲಾನುಭವಿಗಳಿಗೆ ಕೋಳಿಮೊಟ್ಟೆ ಸರಬರಾಜಾಗುವವರೆಗೂ ಕೋಳಿಮೊಟ್ಟೆ ವಿತರಣೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಈ ಹಿಂದಿನಂತೆ ಬಾಲವಿಕಾಸ ಸಮಿತಿಯ ಜಂಟಿ ಖಾತೆಗೆ ಹಣ ಜಮೆ ಮಾಡಿ ಅಂಗನವಾಡಿ ಕಾರ್ಯಕರ್ತೆಯರು ಕೋಳಿಮೊಟ್ಟೆಗಳನ್ನು ಸ್ಥಳೀಯವಾಗಿ ಖರೀದಿಸಿ ಫಲಾನುಭವಿಗಳಿಗೆ ವಿತರಿಸಲು ಕ್ರಮ ವಹಿಸಲಾಗಿದೆ. |

**ಸಂಖ್ಯೆ:ಮಮಇ 243 ಐಸಿಡಿ 2023**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.